**May 15, 2024**

**ALL INDIA RADIO- DHARWAD**

**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು**

- ಮುಂಬರುವ ವಿಧಾನಪರಿ ’ತ್ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದಿಂದ ಉತ್ತಮ ಸಾಧನೆ –ಮುಖ್ಯಮಂತ್ರಿ ಸಿದ್ದರಾಮಯ್ಯ ವಿಶ್ವಾಸ.

- ಸರ್ಕಾರದ ಗೊಂದಲದ ನಿರ್ಧಾರಗಳಿಂದ ಶಿಕ್ಷಕರು, ವಿದ್ಯಾರ್ಥಿಗಳು ಆತಂಕಕ್ಕೆ– ಮಾಜಿ ವಿಧಾನಪರಿಷತ್ ಸದಸ್ಯ ಅರುಣ ಶಹಾಪುರ ಕಳವಳ.

- ಚುನಾವಣಾ ಮಾದರಿ ನೀತಿ ಸಂಹಿತೆ ಹಿನ್ನೆಲೆ: ರಾಜ್ಯಾದ್ಯಂತ ಮಹರ್ಷಿ ಶ್ರೀ ಭಗೀರಥ ಜಯಂತಿ ಸರಳ ಆಚರಣೆ.

- ಉತ್ತರಕನ್ನಡ ಜಿಲ್ಲಾ ಕೆ.ಡಿ.ಸಿ.ಸಿ. ಬ್ಯಾಂಕ್‌ಗೆ ಬೆಳೆ ಹಾನಿ ವಿಮೆ 41 ಕೋಟಿ ಜಮೆ– ಶಾಸಕ ಶಿವರಾಮ ಹೆಬ್ಬಾರ್.

ಈಗ ವಾರ್ತೆಗಳ ವಿವರ

*******

ರಾಜ್ಯದಲ್ಲಿ ನಡೆಯುತ್ತಿರುವ ವಿಧಾನಪರಿ ’ತ್ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಉತ್ತಮ ಸಾಧನೆ ಮಾಡಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ದಕ್ಷಿಣ ಶಿಕ್ಷಕರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮರೀತಿಬ್ಬೆಗೌಡ ನಾಮಪತ್ರ ಸಲ್ಲಿಕೆ ಕಾರ್ಯದಲ್ಲಿ ಭಾಗಿಯಾಗುವ ಮುನ್ನ ಮೈಸೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಬಿಜೆಪಿ – ಜೆಡಿಎಸ್ ಪಕ್ಷಗಳು ಮೈತ್ರಿ ಮಾಡಿಕೊಂಡಿವೆ. ಆದರೂ ರಾಜ್ಯದಲ್ಲಿ ಕಾಂಗ್ರೆಸ್‌ಗೆ ಉತ್ತಮ ವಾತಾವರಣವಿದೆ ಎಂದರು.

ಈ ಚುನಾವಣೆಯನ್ನು ಪಕ್ಷ ಗಂಭೀರವಾಗಿ ತೆಗೆದುಕೊಂಡಿದೆ. ಹೀಗಾಗಿ 6 ತಿಂಗಳ ಮೊದಲೇ ಟಿಕೆಟ್ ಘೋ ಣೆ ಮಾಡಲಾಗಿತ್ತು, ಪದವಿಧರರು ಹಾಗೂ ಶಿಕ್ಷಕರು ಪ್ರಬುದ್ಧರಿದ್ದು, ಉತ್ತಮ ಅಭ್ಯರ್ಥಿಗಳಿಗೆ ಮತ ಚಲಾಯಿಸಲಿದ್ದಾರೆ ಎಂದು ಸಿದ್ದರಾಮಯ್ಯ ಹೇಳಿದರು.

*******

ರಾಜ್ಯ ವಿಧಾನಪರಿಷತ್ತಿನ ದಕ್ಷಿಣ ಶಿಕ್ಷಕರ ಕ್ಷೇತ್ರಕ್ಕೆ ಜೂನ್ 3 ರಂದು ಚುನಾವಣೆ ನಡೆಯಲಿದ್ದು, ಈ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಮರಿತಿಬ್ಬೇಗೌಡ ಮೈಸೂರಿನ ಪ್ರಾದೇಶಿಕ ಆಯುಕ್ತರ ಕಚೇರಿಯಲ್ಲಿ ನಿನ್ನೆ ನಾಮಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರಾದ ಎಚ್.ಸಿ.ಮಹದೇವಪ್ಪ, ಮಧು ಬಂಗಾರಪ್ಪ, ಕೆ.ವೆಂಕಟೇಶ್, ಚಲುವರಾಯಸ್ವಾಮಿ, ಕೆಪಿಸಿಸಿ ಕಾರ್ಯಾಧ್ಯಕ್ಷ ತನ್ವೀರ್ ಸೇಠ್, ಶಾಸಕರಾದ ನರೇಂದ್ರ ಸ್ವಾಮಿ, ಶಿವಲಿಂಗೇಗೌಡ ಸೇರಿದಂತೆ ಶಾಸಕರು, ಪಕ್ಷದ ಮುಖಂಡರು ಉಪಸ್ಥಿತರಿದ್ದರು.

*******

ದೇಶದಲ್ಲಿ ಐಎನ್‌ಡಿಐಎ ಒಕ್ಕೂಟದ ಪರವಾದ ಅಲೆ ಇದ್ದು, ಸರ್ಕಾರ ರಚನೆ ಮಾಡಲಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣೆಯಲ್ಲಿ ರಾಜ್ಯ ಮಾತ್ರವಲ್ಲದೆ ಇಡೀ ದೇಶದಲ್ಲಿಯೇ ಜನತೆ ಕಾಂಗ್ರೆಸ್ ಮೈತ್ರಿಕೂಟವನ್ನು ಬೆಂಬಲಿಸಿದ್ದಾರೆ ಎಂದರು.

ರಾಜ್ಯದಲ್ಲಿ ಸರ್ಕಾರ ಬೀಳುವ ಸಂಕೇತ ನೀಡಿರುವ ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ ಶಿಂಧೆ ಅವರ ಹೇಳಿಕೆ ಕುರಿತು ಪ್ರತಿಕ್ರಿಯಿಸಿದ ಅವರು, ಅವರ ಹೇಳಿಕೆಯಲ್ಲಿ ಹುರುಳಿಲ್ಲ. ಮಹಾರಾಷ್ಟ್ರ ಸರ್ಕಾರವೇ ಬಿದ್ದು ಹೋಗುವ ಸ್ಥಿತಿಯಲ್ಲಿದೆ. ಎಲ್ಲವೂ ತಿರುಗುಬಾಣವಾಗಲಿದೆ ಎಂದು ಡಿ.ಕೆ.ಶಿವಕುಮಾರ ಹೇಳಿದರು.

*******

ಶಿಕ್ಷಕರು, ವಿದ್ಯಾರ್ಥಿಗಳ ವಿ ಯದಲ್ಲಿ ರಾಜ್ಯ ಸರ್ಕಾರ ಗೊಂದಲದ ನಿರ್ಧಾರಗಳನ್ನು ತೆಗೆದುಕೊಳ್ಳುತ್ತಿದೆ ಎಂದು ವಿಧಾನಪರಿ ತ್‌ನ ಮಾಜಿ ಸದಸ್ಯ ಅರುಣ್ ಶಹಾಪುರ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರದ ಗೊಂದಲದ ನಿರ್ಧಾರಗಳಿಂದಾಗಿ ಶಿಕ್ಷಕರು, ವಿದ್ಯಾರ್ಥಿಗಳು ಆತಂಕಕ್ಕೊಳಗಾಗಿದ್ದಾರೆ ಎಂದರು.

ವಿದ್ಯಾರ್ಥಿಗಳಿಗೆ ಪಠ್ಯಕ್ರಮದಲ್ಲಿ ಗೊಂದಲ, ಶಿಕ್ಷಕರಿಗೆ ವೆಬ್ ಕಾಸ್ಟಿಂಗ್ ತರಬೇತಿ ನೀಡದೆ ಇರುವುದು, ಗ್ರೇಸ್ ಮಾರ್ಕ್ಸ್ ವಿಚಾರದಲ್ಲಿ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರ ನಿರ್ಧಾರಗಳು ವಿದ್ಯಾರ್ಥಿಗಳನ್ನು ವಿಚಲಿತಗೊಳಿಸಿದೆ. ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಧಿಕ್ಕರಿಸಿ, ರಾಜ್ಯ ಸರ್ಕಾರ ತನ್ನದೇ ಆದ ಶಿಕ್ಷಣ ನೀತಿಯನ್ನು ಮುಂದುವರಿಸುತ್ತಿರುವುದು ಇದಕ್ಕೆಲ್ಲ ಮೂಲ ಕಾರಣ ಎಂದು ಅವರು ಹೇಳಿದರು.

*******

ಈ ಬಾರಿಯ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ರಾಜ್ಯಕ್ಕೆ ಪ್ರಥಮ ರ್‍ಯಾಂಕ್ ಪಡೆದ ಬಾಗಲಕೋಟೆ ಜಿಲ್ಲೆಯ ಮೆಳ್ಳಿಗೇರಿ ಮೊರಾರ್ಜಿ ವಸತಿ ಶಾಲೆಯ ವಿದ್ಯಾರ್ಥಿನಿ ಕುಮಾರಿ ಅಂಕಿತ ಹಾಗೂ ದ್ವಿತೀಯ ರ್‍ಯಾಂಕ್ ಪಡೆದ ಮಂಡ್ಯ ತಾಲೂಕಿನ ತುಂಬಿಗೆರೆ ಮೊರಾರ್ಜಿ ಶಾಲೆಯ ವಿದ್ಯಾರ್ಥಿ ನವನೀತ್ ಕೆ.ಸಿ ಅವರನ್ನು ನಿನ್ನೆ ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಈ ವಿದ್ಯಾರ್ಥಿಗಳ ಮುಂದಿನ ಉಜ್ವಲ ಭವಿ ್ಯದ ವಿದ್ಯಾಭ್ಯಾಸಕ್ಕೆ ಅನುಕೂಲವಾಗಲಿ ಎಂದು ಅಂಕಿತಾಗೆ 5 ಲಕ್ಷ ರೂಪಾಯಿ ಹಾಗೂ ನವನೀತ್ ಗೆ 3 ಲಕ್ಷ ರೂಪಾಯಿಗಳ ಪ್ರೋತ್ಸಾಹ ಧನ ನೀಡಿದರು.

ಇದೇ ವೇಳೆ ಈ ಇಬ್ಬರು ವಿದ್ಯಾರ್ಥಿಗಳು ಓದಿದ ಶಾಲೆಗಳು ಮತ್ತ ್ಟ ಸರ್ಕಾರಿ ಶಾಲೆಗಳಿಗೆ ಸ್ಫೂರ್ತಿಯಾಗಲಿ ಎಂದು ಅಂಕಿತಾ ಓದಿದ ಶಾಲೆಯ ಅಭಿವೃದ್ಧಿಗೆ ಒಂದು ಕೋಟಿ ರೂಪಾಯಿ ಹಾಗೂ ನವನೀತ್ ವ್ಯಾಸಂಗ ಮಾಡಿದ ಶಾಲೆಯ ಅಭಿವೃದ್ಧಿಗೆ 50 ಲಕ್ಷ ರೂಪಾಯಿಗಳ ಅನುದಾನ ನೀಡಲಾಗುವುದು ಎಂದು ಮುಖ್ಯಮಂತ್ರಿ ಹೇಳಿದರು.

*******

ಗಂಗೆಯನ್ನು ಧರೆಗೆ ತಂದ ಮಹರ್ಷಿ ಶ್ರೀ ಭಗೀರಥರನ್ನು ಸ್ಮರಿಸಿ, ಗೌರವಿಸುವ ನಿಟ್ಟಿನಲ್ಲಿ ನಿನ್ನೆ ರಾಜ್ಯಾದ್ಯಂತ ಭಗೀರಥ ಜಯಂತಿ ಆಚರಿಸಲಾಯಿತು. ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಜಯಂತಿಯನ್ನು ಸರಳವಾಗಿ ಆಚರಿಸಲಾಯಿತು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದ ತಾಲೂಕು ಕಚೇರಿಯಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಭಗೀರಥ ಜಯಂತಿ ಆಚರಿಸಲಾಯಿತು. ತಹಸೀಲ್ದಾರ್ ವಿಭಾ ವಿದ್ಯಾ ರಾಥೋಡ್, ಭಗೀರಥರ ಭಾವಚಿತ್ರಕ್ಕೆ ಪು ್ಪ ನಮನ ಸಲ್ಲಿಸಿದರು.

ಶಿವಮೊಗ್ಗ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಶ್ರೀ ಭಗೀರಥ  ಜಯಂತಿಯನ್ನು ಸರಳ ಹಾಗೂ ಸಾಂಕೇತಿಕವಾಗಿ ಕುವೆಂಪು ರಂಗಮಂದಿರದಲ್ಲಿ  ಆಚರಿಸಲಾಯಿತು

ಗದಗ ಜಿಲ್ಲಾಡಳಿತ ಭವನದಲ್ಲಿ ಮಹರ್ಷಿ ಶ್ರೀ ಭಗೀರಥರ  ಜಯಂತ್ಯೋತ್ಸವ ಕಾರ್ಯಕ್ರಮ ಜರುಗಿತು. ಅಪರ ಜಿಲ್ಲಾಧಿಕಾರಿ ಸುರೇಖಾ ಅವರು ಭಗೀರಥರ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಗೌರವ ನಮನ ಸಲ್ಲಿಸಿದರು.

ಯಾದಗಿರಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸರಳ ಹಾಗೂ ಸಾಂಕೇತಿಕವಾಗಿ ಭಗೀರಥ ಮಹರ್ಷಿರವರ ಭಾವಚಿತ್ರಕ್ಕೆ ಪು  ಷ್ಪಾರ್ಚನೆಗೈದು ಜಯಂತಿ ಆಚರಿಸಲಾಯಿತು. ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಸೇರಿದಂತೆ ಗಣ್ಯರು ಪಾಲ್ಗೊಂಡಿದ್ದರು.

ರಾಜ್ಯದ ವಿವಿಧೆಡೆ ಕೂಡಾ ಶ್ರೀ ಭಗೀರಥ ಜಯಂತಿಯನ್ನು ಸರಳವಾಗಿ ಶ್ರದ್ಧೆಯಿಂದ ಆಚರಿಸಿದ ವರದಿಗಳು ಬಂದಿವೆ.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಉತ್ತರಕನ್ನಡ ಜಿಲ್ಲಾ ಕೆ.ಡಿ.ಸಿ.ಸಿ. ಬ್ಯಾಂಕ್‌ಗೆ 2023-24 ನೇ ಸಾಲಿನ ಭತ್ತ ಹಾಗೂ ಗೋವಿನ ಜೋಳದ ಬೆಳೆ ಹಾನಿ ವಿಮೆ 41 ಕೋಟಿ ರೂಪಾಯಿ ಜಮಾ ಆಗಿದೆ ಎಂದು ಕೆ.ಡಿ.ಸಿ.ಸಿ ಬ್ಯಾಂಕ್ ಅಧ್ಯಕ್ಷರೂ ಆಗಿರುವ ಶಾಸಕ ಶಿವರಾಮ ಹೆಬ್ಬಾರ್ ತಿಳಿಸಿದ್ದಾರೆ.

ಕಳೆದ ಸಾಲಿನಲ್ಲಿ ಮುಂಗಾರು ಮಳೆ ಕೊರತೆಯಿಂದ  ಭತ್ತ, ಗೋವಿನ ಜೋಳ ಬೆಳೆಗೆ ಹಾನಿಯಾಗಿ ರೈತ ಸಮುದಾಯಕ್ಕೆ ಗಾಯದ ಮೇಲೆ ಬರೆ ಎಳೆದಂತಾಗಿತ್ತು. ಈ ಬೆಳೆ ವಿಮೇ ಬಿಡುಗಡೆಯಿಂದಾಗಿ ಭತ್ತ, ಗೋವಿನ ಜೋಳ ಬೆಳೆದು ಜೀವನ ಸಾಗಿಸುತ್ತಿದ್ದ ಹಲವಾರು ರೈತರಿಗೆ ಆರ್ಥಿಕ ಶಕ್ತಿ ಬಂದಂತಾಗಿದೆ ಎಂದಿದ್ದಾರೆ.

ವಿಮಾ ಕಂಪನಿ ಮಾನದಂಡದ ಅನ್ವಯ ಉತ್ತರಕನ್ನಡ ಜಿಲ್ಲೆಯ ಭತ್ತ ಹಾಗೂ ಗೋವಿನ ಜೋಳ ಬೆಳೆದ ರೈತರಿಗೆ ಜಿಲ್ಲಾ ಮಧ್ಯವರ್ತಿ ಬ್ಯಾಂಕ್‌ನಿಂದ ನೇರ ನಗದು ವರ್ಗಾವಣೆ ಮೂಲಕ ಪರಿಹಾರದ ಮೊತ್ತವನ್ನು ವರ್ಗಾಯಿಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

*******

ಧಾರವಾಡ ಜಿಲ್ಲೆಯಲ್ಲಿ ಈಗಾಗಲೇ ಹತ್ತು ಹಂತಗಳಲ್ಲಿ ಒಟ್ಟು 1,06,707 ರೈತರಿಗೆ 108.12 ಕೋಟಿ ರೂಪಾಯಿಗಳ ಇನಪುಟ್ ಸಬ್ಸಿಡಿ ಬಿಡುಗಡೆಯಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಬಿಡುಗಡೆ ಮಾಡಿರುವ ಅವರು, ಸರ್ಕಾರದಿಂದ ನೇರವಾಗಿ ರೈತರ ಬ್ಯಾಂಕ್ ಖಾತೆಗಳಿಗೆ ಪರಿಹಾರ ಧನವನ್ನು ಜಮೆ ಮಾಡಲಾಗಿದೆ. ಬಾಕಿ ಉಳಿದ ಅರ್ಹ ರೈತರಿಗೆ ಮುಂದಿನ ಕಂತುಗಳಲ್ಲಿ ಪರಿಹಾರ ಪಾವತಿಸುವ ಕಾರ್ಯ ಪ್ರಗತಿಯಲ್ಲಿರುತ್ತದೆ ಎಂದಿದ್ದಾರೆ.

ಈಗಾಗಲೇ ಬೆಳೆಪರಿಹಾರ ಮೊತ್ತ ಜಮೆಯಾದ ರೈತರ ಪಟ್ಟಿಯನ್ನು ನಾಡ ಕಚೇರಿ, ಗ್ರಾಮ ಪಂಚಾಯತಿ, ರೈತ ಸಂಪರ್ಕ ಕೇಂದ್ರಗಳು ಹಾಗೂ ತಹಶೀಲ್ದಾರ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಚುರಪಡಿಸಲಾಗಿದೆ. ಅಲ್ಲದೇ, ಎಲ್ಲಾ ತಹಶೀಲ್ದಾರ ಕಛೇರಿಗಳಲ್ಲಿ ಸಹಾಯವಾಣಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದ್ದಾರೆ.

*******

ಗುಡುಗು–ಸಿಡಿಲು ಹಾಗೂ ಅಕಾಲಿಕ ಮಳೆ ಅವಘಡಗಳನ್ನು ತಪ್ಪಿಸುವ ನಿಟ್ಟಿನಲ್ಲಿ ತಾಲೂಕಾ ಆಡಳಿತಗಳು ಮುನ್ನೆಚ್ಚರಿಕೆ ವಹಿಸಬೇಕು ಎಂದು ಹಾವೇರಿ ಜಿಲ್ಲಾಧಿಕಾರಿ ರಘುನಂದನ್ ಮೂರ್ತಿ ಸೂಚಿಸಿದ್ದಾರೆ.

ಹಾವೇರಿಯಲ್ಲಿ ನಿನ್ನೆ ಜಿಲ್ಲಾ ಹಾಗೂ ತಾಲೂಕಾ ಮಟ್ಟದ ಅಧಿಕಾರಿಗಳೊಂದಿಗೆ ನಡೆಸಿದ ಸಭೆಯಲ್ಲಿ ಈ ಸೂಚನೆ ನೀಡಿದ ಅವರು, ಅವಘಡಗಳು ಸಂಭವಿಸಿದಾಗ ಪರಿಹಾರ ಒಳಗೊಂಡಂತೆ ತಕ್ಷಣ ಜನರ ಸಮಸ್ಯೆಗಳಿಗೆ ಅಧಿಕಾರಿಗಳು ಸ್ಪಂದಿಸಬೇಕು. ಮುಂಗಾರು ಮಳೆಯ ಪ್ರಾಕೃತಿಕ ಅವಘಡಗಳನ್ನು ತಗ್ಗಿಸುವ ನಿಟ್ಟಿನಲ್ಲಿ ತಾಲೂಕಾವಾರು ವಿಪತ್ತು ಪರಿಹಾರ ಕ್ರಮಗಳ ಯೋಜಿತ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಹೇಳಿದರು.

*******

ದಬ್ಬಾಳಿಕೆ ಮತ್ತು ಜೀವವಿರೋಧಿ ಸಂಸ್ಕೃತಿಯನ್ನು ತಿರಸ್ಕರಿಸಿದ ಬಸವಣ್ಣನವರು ಸಾಮಾಜಿಕ ಮೌಲ್ಯವನ್ನು ಎತ್ತಿ ಹಿಡಿಯುವ ಶರಣ ಸಂಸ್ಕೃತಿಗೆ ಒತ್ತು ಕೊಟ್ಟಿದ್ದರು ಎಂದು ಡಾ.ಎಂ.ಎಂ ಕಲಬುರ್ಗಿ ರಾಷ್ಟ್ರೀಯ ಪ್ರತಿಷ್ಠಾನದ ಅಧ್ಯಕ್ಷ ಡಾ.ವೀರಣ್ಣ ರಾಜೂರ ಅಭಿಪ್ರಾಯಪಟ್ಟಿದ್ದಾರೆ.

ಬಸವ ಜಯಂತಿ ಮತ್ತು ಮುರಗೋಡ ಬಸವೇಶ್ವರ ಪೀಠದ ಸುವರ್ಣ ಮಹೋತ್ಸವ ಸಮಾರಂಭದ ಅಂಗವಾಗಿ ಧಾರವಾಡದಲ್ಲಿ ನಡೆದ ಎರಡು ದಿನಗಳ ಅಂತಾರಾಷ್ಟ್ರೀಯ ವಿಚಾರ ಸಂಕಿರಣದ ಸಮಾರೋಪ ಸಮಾರಂಭದಲ್ಲಿ

ಮಾತನಾಡಿದ ಅವರು, ಶರಣ ಸಂಸ್ಕೃತಿ ಕನ್ನಡದ ಮೊದಲ ಸಂಸ್ಕೃತಿಯಾಗಿದ್ದು, ಇಲ್ಲಿ ತಾರತಮ್ಯವಿಲ್ಲ, ಜೀವವಿರೋಧಿ ಸಂಗತಿಗಳಿಲ್ಲ, ಎಲ್ಲರದೂ ಸಾತ್ವಿಕ ಬದುಕು ಆಗಬೇಕೆಂಬುದು ಅವರ ಉದ್ದೇಶವಾಗಿತ್ತು ಎಂದು ಅವರು ಹೇಳಿದರು.

ವಿಚಾರ ಸಂಕಿರಣದಲ್ಲಿ ಒಟ್ಟು 16 ಮಂದಿ ಗಣ್ಯರು ವಿಚಾರ ಮಂಡಿಸಿದರು.

*******

ರಾಜ್ಯದಲ್ಲಿ ಇಂದು ಕೂಡಾ ಮಳೆ ಮುಂದುವರಿಯಲಿದ್ದು, ಕೆಲವೆಡೆ ಗುಡುಗು ಸಹಿತ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಕೊಡಗು, ಮೈಸೂರು ಹಾಗೂ ಮಂಡ್ಯ ಜಿಲ್ಲೆಗೆ ಆರೇಂಜ್ ಅಲರ್ಟ್ ಘೋಷಿಸಲಾಗಿದ್ದು, ಈ ಜಿಲ್ಲೆಗಳ ಜತೆಗೆ ಚಾಮರಾಜನಗರ, ಶಿವಮೊಗ್ಗ, ಬಳ್ಳಾರಿ ಹಾಗೂ ಹಾಸನ ಜಿಲ್ಲೆಯ ಕೆಲ ಸ್ಥಳಗಳಲ್ಲಿ ಭಾರಿ ಗಾಳಿ ಹಾಗೂ ಗುಡುಗು ಸಹಿತ ಧಾರಾಕಾರ ಮಳೆಯಾಗುವ ಸಾಧ್ಯತೆ ಇದೆ.

ರಾಮನಗರ, ಚಿಕ್ಕಮಗಳುರು, ತುಮಕೂರು, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ ಹಾಗೂ ದಾವಣಗೆರೆ ಜಿಲ್ಲೆಯ ಕೆಲವು ಸ್ಥಳಗಳಲ್ಲಿ ಜೋರು ಗಾಳಿಯೊಂದಿಗೆ ಮಳೆಯಾಗುವ ಸಂಭವವಿದ್ದು, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಗುಡುಗು ಸಹಿತ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ ಎಂದು ಇಲಾಖೆ ಹೇಳಿದೆ.

ಮುಂದಿನ ಐದು ದಿನಗಳಲ್ಲಿ ರಾಜ್ಯದಾದ್ಯಂತ ಗರಿಷ್ಠ ತಾಪಮಾನ 2 ರಿಂದ 4 ಡಿಗ್ರಿ ಸೆಲ್ಸಿಯಸ್ ಇಳಿಕೆಯಾಗುವ ಸಾಧ್ಯತೆ ಎಂದು ಇಲಾಖೆ ಮಾಹಿತಿ ನೀಡಿದೆ.

*******

ಈಗ ಸಂಕ್ಷಿಪ್ತ ಸುದ್ದಿಗಳು

ಹಾವೇರಿ ಜಿಲ್ಲೆಯಲ್ಲಿ 2023-24 ನೇ ಬೇಸಿಗೆ ಹಂಗಾಮಿನ ಬೆಳೆ ಸಮೀಕ್ಷೆ ಮೂಲಕ ಸಂಗ್ರಹಿಸಿದ ಬೆಳೆ ಮಾಹಿತಿ ಕುರಿತು ರೈತರ ಆಕ್ಷೇಪಣೆಗಳನ್ನು ಸಲ್ಲಿಸಲು ರಾಜ್ಯ ಸರ್ಕಾರ ಮೇ 17 ರವರೆಗೆ ಅವಕಾಶ ಕಲ್ಪಿಸಿದೆ.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಮುಂಬರುವ ವಿಧಾನಪರಿ ತ್ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದಿಂದ ಉತ್ತಮ ಸಾಧನೆ-ಮುಖ್ಯಮಂತ್ರಿ ಸಿದ್ದರಾಮಯ್ಯ ವಿಶ್ವಾಸ.

ಸರ್ಕಾರದ ಗೊಂದಲದ ನಿರ್ಧಾರಗಳಿಂದ ಶಿಕ್ಷಕರು, ವಿದ್ಯಾರ್ಥಿಗಳು ಆತಂಕಕ್ಕೆ- ಮಾಜಿ ವಿಧಾನಪರಿಷತ್ ಸದಸ್ಯ ಅರುಣ ಶಹಾಪುರ ಕಳವಳ.

ಚುನಾವಣಾ ಮಾದರಿ ನೀತಿ ಸಂಹಿತೆ ಹಿನ್ನೆಲೆ: ರಾಜ್ಯಾದ್ಯಂತ ಮಹರ್ಷಿ ಶ್ರೀ ಭಗೀರಥ ಜಯಂತಿ ಸರಳ ಆಚರಣೆ.

ಉತ್ತರಕನ್ನಡ ಜಲ್ಲಾ ಕೆ.ಡಿ.ಸಿ.ಸಿ. ಬ್ಯಾಂಕ್‌ಗೆ ಬೆಳೆ ಹಾನಿ ವಿಮೆ **41** ಕೋಟಿ ಜಮೆ- ಶಾಸಕ ಶಿವರಾಮ ಹೆಬ್ಬಾರ್

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು
ನಮ್ಮ ಮುಂದಿನ ರಾಷ್ಟ್ರೀಯ ವಾರ್ತೆ **7** ಗಂಟೆ **35** ನಿಮಿಷಕ್ಕೆ

******